ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1320(1637)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕಾಂತರಾಜ್(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಎಸ್.ಸಿ.ಪಿ./ಟಿ.ಎಸ್.ಪಿ. ಅನುದಾನ ಬಳಕೆಯ ಬಗ್ಗೆ

(ಅ) ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಾವುವು; ಇವುಗಳನ್ನು ಯಾವಾಗ ಸ್ಥಾಪಿಸಲಾಯಿತು; ಇದರ ಉದ್ದೇಶಗಳೇನು; ಇವುಗಳ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಜಿಲ್ಲೆ ಮತ್ತು ತಾಲ್ಲೂಕುಗಳಾವುವು; (ವಿವರವಾದ ಮಾಹಿತಿ ನೀಡುವುದು)

(ಆ) ಈ ನಿಗಮಗಳಿಗೆ 2019-20 ಮತ್ತು 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡಿರುವ ಎಸ್.ಸಿ.ಪಿ./ಟಿ.ಎಸ್.ಪಿ. ಅನುದಾನವೆಷ್ಟು; ಯಾವಾಗ ಬಿಡುಗಡೆ ಮಾಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) 2019-20 ಮತ್ತು 2020-21ನೇ ಸಾಲಿನಲ್ಲಿ ಈ ನಿಗಮಗಳಿಗೆ ಬಿಡುಗಡೆ ಮಾಡಲಾದ ಎಸ್.ಸಿ.ಪಿ./ಟಿ.ಎಸ್.ಪಿ. ಹಣದಲ್ಲಿ ಎಷ್ಟು ವಿಧಗಳಿವೆ; ಅವು ಯಾವುವು; ವೈಯಕ್ತಿಕ ಫಲಾನುಭವಿಗೆ ಎಸ್.ಸಿ.ಪಿ./ಟಿ.ಎಸ್.ಪಿ. ಹಣವನ್ನು ಬಿಡುಗಡೆ ಮಾಡಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು)

(ಈ) ಈವರೆಗೂ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಹಣ ಬಿಡುಗಡೆ ಮಾಡಲಾಗುವುದು?